# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ    Kannada Daily

ಹಾಸನ    E-mail : kannadapostnews@gmail.com    / ಕನ್ನಡ post    Price: ₹1

Vol.No.01 | Issue. 188 | Pages. 2 | Date: 04-06-2025, WEDNESDAY    RNI NO: KARKAN/2024/89601

ಸಂಪುಟ : 01 - ಸಂಚಿಕೆ : 188 - ಪುಟಗಳು : 2 - 04 ಜೂನ್ 2025 ಬುಧವಾರ    Ph: 8762954248    ದರ : ₹1

# ಅಧಿಕಾರಿಗಳು ಜಿಲ್ಲಾ ಕೇಂದ್ರದಲ್ಲೇ ಇರಬೇಕು

## ತುರ್ತು ರಜೆಯ ಅವಶ್ಯವಿದ್ದರೆ ಅನುಮತಿ ಕಡ್ಡಾಯ | ಡಿಸಿ ಸತ್ಯಭಾಮ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲಾ ಮಟ್ಟದ ಎಲ್ಲಾ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿಯೇ ಇರಬೇಕು. ಸಮಯಕ್ಕೆ ಸರಿಯಾಗಿ ಕಚೇರಿಗೆ ಹಾಜರಾಗಿ ನಿಗದಿತ ಕೆಲಸ ಮಾಡುವ ಮೂಲಕ ಅಭಿವೃದ್ಧಿಗೆ ವೇಗ ನೀಡಬೇಕು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಸಭೆಯಲ್ಲಿ ಮಾತನಾಡಿ, ಅಧಿಕಾರಿಗಳು ತುರ್ತು ಸಂದರ್ಭದಲ್ಲಿ ರಜೆ ಪಡೆದು ಕೇಂದ್ರ ಸ್ಥಾನ ಬಿಡಬೇಕಾದಲ್ಲಿ ತಮ್ಮ ಅನುಮತಿ ಪಡೆಯಬೇಕು. ಜೂನ್‌ನಲ್ಲಿ ಅಧಿಕ ಮಳೆಯಾಗುವ ಮುನ್ಸೂಚನೆ ಇದೆ. ಕೃಷಿ ಮತ್ತು ತೋಟಗಾರಿಕೆ ಇಲಾಖೆ ಅಧಿಕಾರಿಗಳು ಬಿತ್ತನೆ ಬೀಜ, ರಸಗೊಬ್ಬರ ಸಮರ್ಪಕವಾಗಿ ವಿತರಣೆ ಮಾಡಲು ಅಗತ್ಯ ಪ್ರಮಾಣದಲ್ಲಿ ದಾಸ್ತಾನು ಇರುವಂತೆ ನೋಡಿಕೊಳ್ಳಿ ಎಂದು ತಿಳಿಸಿದರು.




### ಡಿಎಪಿಗೆ ಅಭಾವ ಸಾಧ್ಯತೆ

ಡಿಎಪಿ ಗೊಬ್ಬರ ಸಾಕಷ್ಟು ಪ್ರಮಾಣದಲ್ಲಿ ಲಭ್ಯವಿಲ್ಲ. ಈ ಗೊಬ್ಬರಕ್ಕೆ ಬದಲಾಗಿ ಇತರೆ ಗೊಬ್ಬರವನ್ನು ಬಳಸಲು ರೈತರಿಗೆ ತಿಳವಳಿಕೆ ನೀಡಬೇಕು. ರೈತ ಸಂಪರ್ಕ ಕೇಂದ್ರಗಳನ್ನು ಚಟುವಟಿಕೆಯಿಂದ ಇರುವಂತೆ ನೋಡಿಕೊಳ್ಳಬೇಕು. ಹೋಬಳಿ ಮಟ್ಟದಲ್ಲಿ ಜನಸ್ಪಂದನ ಕಾರ್ಯಕ್ರಮ ಹಮ್ಮಿಕೊಳ್ಳಬೇಕು. ಜನರಲ್ಲಿ ಜಾಗೃತಿ ಮೂಡಿಸಿ ಸಮಸ್ಯೆಗಳ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ತಿಳಿಸಿದರು.

ರೈತರ ಆತ್ಮಹತ್ಯೆ ಬಗ್ಗೆ ಗಮನಹರಿಸಿ ಅಧ್ಯಯನ ನಡೆಸಬೇಕು. ಕೃಷಿಭೂಮಿ ಸವಕಳಿ ತಡೆಯಲು ಕ್ರಮ ಕೈಗೊಳ್ಳಬೇಕು. ಕೆರೆ ಒತ್ತುವರಿ ತೆರವುಗೊಳಿಸಲು ತಹಸೀಲ್ದಾರ್ ಅವರಿಗೆ ಸಹಕರಿಸುವಂತೆ ಜಂಟಿ ಕೃಷಿ ನಿರ್ದೇಶಕರಿಗೆ ತಿಳಿಸಿದರು.

> ಜಿಲ್ಲಾ ನಗರಾಭಿವೃದ್ಧಿ ಕೋಶ ತೆರಿಗೆ ಸಂಗ್ರಹದಲ್ಲಿ ರಾಜ್ಯದಲ್ಲೇ ಹಾಸನ 2ನೇ ಸ್ಥಾನದಲ್ಲಿದೆ. ಇ-ಖಾತಾ ಅಭಿಯಾನದಲ್ಲಿ ಮೊದಲ ಸ್ಥಾನದಲ್ಲಿದೆ. ಈ ಪ್ರಗತಿ ಹೀಗೆ ಮುಂದುವರೆಯಬೇಕು. ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡಬೇಕು.
>
> – ಸಿ. ಸತ್ಯಭಾಮ, ಜಿಲ್ಲಾಧಿಕಾರಿ

### ಆಸ್ಪತ್ರೆಗಳಲ್ಲಿ ನಾಮಫಲಕ ಅಳವಡಿಸಿ

ಸಾರ್ವಜನಿಕ ಆಸ್ಪತ್ರೆಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರಿಗೆ ಉಚಿತ ಸೇವೆ ಒದಗಿಸಲು ಮುತುವರ್ಜಿ ವಹಿಸಬೇಕು. ಸೂಕ್ತ ಸ್ಥಳಗಳಲ್ಲಿ ನಾಮಫಲಕ ಹಾಕಬೇಕು. ಶಿಶು ಮತ್ತು ತಾಯಿ ಮರಣ ಪ್ರಮಾಣ ಕಡಿಮೆ ಮಾಡಲು ಕ್ರಮ ವಹಿಸಬೇಕು. ಔಷಧಿಗಳಿಗೆ ಹೊರಗೆ ತರಲು ಚೀಟಿ ಬರೆದು ಕೊಡಬಾರದು ಎಂದು ನಿರ್ದೇಶನ ನೀಡಿದರು.

ಶಿಶು ಮತ್ತು ತಾಯಿ ಮರಣಕ್ಕೆ ಕಾರಣರಾದ ವೈದ್ಯರ ಒಂದು ತಿಂಗಳ ವೇತನ ಕಡಿತ ಮಾಡಲು ನಿರ್ದೇಶನ ನೀಡಿದರು. ಪ್ರತಿದಿನ ಕೋವಿಡ್ ಬುಲೆಟಿನ್ ನೀಡುವಂತೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಅವರಿಗೆ ಸೂಚನೆ ನೀಡಿದರು.

ಪ್ರತಿ ತಾಲ್ಲೂಕು ಆಸ್ಪತ್ರೆಯಲ್ಲಿ ಡಯಾಲಿಸಿಸ್‌ಗೆ ಐದು ಬೆಡ್ ಕಾಯ್ದಿರಿಸಬೇಕು. ಬಯೋ ಮೇಟ್ರಿಕ್ ಹಾಜರಾತಿಗೆ ಕ್ರಮವಹಿಸುವಂತೆ ಸೂಚಿಸಿದ ಅವರು ನಮ್ಮ ಕ್ಲಿನಿಕ್ ಹಾಗೂ 15ನೇ ಹಣಕಾಸಿನಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಮೂಲಕ ನೀಡಿರುವ ಸವಲತ್ತುಗಳ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವಂತೆ ಡಿಹೆಚ್ಓ ಡಾ. ಅನಿಲ್‌ಗೆ ಸೂಚಿಸಿದರು. ವೈದ್ಯಕೀಯ ಕಾಲೇಜಿನಲ್ಲಿ ಬೋಧನೆ ಮಾಡುವ ವೈದ್ಯರು ಹಾಜರಾತಿ ಹಾಕಿ ಹೊರಗೆ ಹೋಗುವಂತಿಲ್ಲ.

ಕಡ್ಡಾಯವಾಗಿ ಕಾಲೇಜು ನಡೆಯುವ ಸಂದರ್ಭದಲ್ಲಿ ಲಭ್ಯವಿರಬೇಕು. ಹಿಮ್ಸ್‌ನಲ್ಲಿ ಕರ್ತವ್ಯ ನಿರ್ವಹಿಸುವ ವೈದ್ಯರು ನಿಗದಿತ ಸೇವಾ ಅವಧಿಯಲ್ಲಿ ಆಸ್ಪತ್ರೆಯಲ್ಲಿಯೇ ಇರಬೇಕು. ಇದರ ಬಗ್ಗೆ ನಿಗಾ ವಹಿಸುವಂತೆ ಹಿಮ್ಸ್ ನಿರ್ದೇಶಕರಿಗೆ ತಿಳಿಸಿದರು.

### ದಾಖಲಾತಿ ಆಂದೋಲನ ನಡೆಸಿ

ಶಾಲಾ ದಾಖಲಾತಿಗೆ ಆಂದೋಲನ ನಡೆಸಬೇಕು. ಶಾಲಾ ಆಸ್ತಿ ಸಂರಕ್ಷಿಸಲು ನಿಗಾವಹಿಸಿ, ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ಗಮನಹರಿಸಬೇಕು. ಮಳೆಗಾಲದಲ್ಲಿ ಶಾಲಾ ಕೊಠಡಿಗಳು ಸೋರುತ್ತಿರುವ ಬಗ್ಗೆ ಗಮನಹರಿಸಿ ಪರಿಶೀಲನೆ ಮಾಡಿ ದುರಸ್ತಿ ಮಾಡಿಸಿ ಯಾವುದೇ ಅನಾಹುತಗಳು ಸಂಭವಿಸದಂತೆ ಎಚ್ಚರಿಕೆ ವಹಿಸಿ ಎಂದು ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕರಿಗೆ ಸೂಚಿಸಿದರು.

ಎಸ್‌ಎಸ್‌ಎಲ್‌ಸಿ ಫಲಿತಾಂಶ ಉನ್ನತಿಗಾಗಿ ಈಗಾಗಲೇ ಕಲಿಕೆಯಲ್ಲಿ ಹಿಂದುಳಿದ ಮಕ್ಕಳನ್ನು ಗುರುತಿಸಿ ಪ್ರಾರಂಭದಿಂದಲೆ ಕಾಳಜಿವಹಿಸಿ ವಿಶೇಷ ತರಗತಿ ನಡೆಸುವುದರ ಮೂಲಕ ಮಕ್ಕಳನ್ನು ಸಜ್ಜುಗೊಳಿಸಲು ಕ್ರಮಕೈಗೊಳ್ಳಿ ಎಂದು ನಿರ್ದೇಶನ ನೀಡಿದರು.

ಸಕಾಲ ಯೋಜನೆಯಡಿ ನಿಗದಿತ ಅವಧಿಯೊಳಗೆ ಅರ್ಜಿ ವಿಲೇವಾರಿ ಮಾಡಲು ಕ್ರಮ ಕೈಗೊಳ್ಳಬೇಕು. ರಸ್ತೆ ಅಪಘಾತ ತಡೆಯುವ ನಿಟ್ಟಿನಲ್ಲಿ ನಗರ ಪ್ರದೇಶಗಳಲ್ಲಿ ನಡೆಯುತ್ತಿರುವ ಸಂತೆಗಳನ್ನು ಸ್ಥಳಾಂತರ ಮಾಡಲು ಜಾಗ ಗುರುತಿಸಲು ತಹಸೀಲ್ದಾರ್‌ಗೆ ಸೂಚಿಸಿದರು.

ಜಿಲ್ಲಾ ಮಾನವ ಅಭಿವೃದ್ಧಿ ಸೂಚ್ಯಂಕ ಏರಿಕೆ ಆಗಬೇಕು ಈ ನಿಟ್ಟಿನಲ್ಲಿ ಎಲ್ಲಾ ಅಧಿಕಾರಿಗಳು ತಮ್ಮ ಬಳಿ ಬರುವ ಸಾರ್ವಜನಿಕರಿಗೆ ಕಾನೂನಿನಡಿ ಕೆಲಸ ಮಾಡುವುದರ ಜೊತೆಗೆ ಮಾನವೀಯತೆ, ಕಾಳಜಿ ಹಾಗೂ ಕರುಣೆಯಿಂದ ಅವರ ಕೆಲಸಗಳನ್ನು ತ್ವರಿತವಾಗಿ ಮಾಡಲು ನಿಗಾವಹಿಸಿ ಜವಾಬ್ದಾರಿಯಿಂದ ಕೆಲಸ ಮಾಡಲು ಸೂಚನೆ ನೀಡಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಉಪ ವಿಭಾಗಾಧಿಕಾರಿಗಳಾದ ಮಾರುತಿ, ಶೃತಿ ಹಾಗೂ ಇತರರಿದ್ದರು.




### ಅನರ್ಹರ ಪತ್ತೆಗೆ ಡಿಸಿ ಸೂಚನೆ

ಅನರ್ಹ ಪಡಿತರ ಚೀಟಿದಾರರ ಬಗ್ಗೆ ಪರಿಶೀಲನೆ ಮಾಡಬೇಕು. ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆ ಅಧಿಕಾರಿಗಳು ಈ ನಿಟ್ಟಿನಲ್ಲಿ ಮುತುವರ್ಜಿ ವಹಿಸಬೇಕು. ಅಕ್ರಮ ಆಹಾರ ಪದಾರ್ಥಗಳ ಸಾಗಾಣಿಕೆ ಬಗ್ಗೆ ನಿಗಾ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಅಗತ್ಯ ವಸ್ತುಗಳ ಖರೀದಿಸಿಟ್ಟುಕೊಳ್ಳುವುದು ಹಾಗೂ ಕಾಳಸಂತೆಯಲ್ಲಿ ಅಗತ್ಯ ವಸ್ತುಗಳು ಮಾರಾಟವಾಗದಂತೆ ಹಾಗೂ ಇ- ಕಾಮರ್ಸ್ ಪ್ಲಾಟ್ ಫಾರಂ ಬಗ್ಗೆಯೂ ಗಮನ ಹರಿಸಬೇಕು ಎಂದು ಹೇಳಿದರು.

## ಖಾಸಗಿ ಶಾಲೆ ವ್ಯಾಮೋಹ ಕಡಿಮೆಯಾಗಲಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸರ್ಕಾರಿ ಶಾಲೆಗಳಲ್ಲಿ ಎಲ್ಲಾ ಸವಲತ್ತು ಕಲ್ಪಿಸಿದ್ದು ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹದಿಂದ ಹೊರಬಂದು ತಮ್ಮ ಮಕ್ಕಳನ್ನು ಸರ್ಕಾರಿ ಶಿಕ್ಷಣ ಸಂಸ್ಥೆಗಳಿಗೆ ಸೇರಿಸಬೇಕು ಎಂದು ಶಾಸಕ ಹೆಚ್.ಪಿ. ಸ್ವರೂಪ್ ಹೇಳಿದರು.

ನಗರದ ಟಿಪ್ಪು ನಗರ ಹಾಗೂ ಚಿಪ್ಪಿನಕಟ್ಟೆಯಲ್ಲಿ ಅಂಗನವಾಡಿ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲೆ ಹಾಗೂ ಅಂಗನವಾಡಿಗಳಲ್ಲಿ ಗುಣಮಟ್ಟದ ಆಹಾರದ ಜೊತೆಗೆ ಮೂಲಭೂತ ಸೌಕರ್ಯ ಕಲ್ಪಿಸಲಾಗುತ್ತಿದೆ. ಸುಸಜ್ಜಿತ ಕಟ್ಟಡ ಮತ್ತು ನುರಿತ ಶಿಕ್ಷಕರು ಸರ್ಕಾರಿ ಶಾಲೆಗಳಲ್ಲಿ ಸಿಗುತ್ತಾರೆ. ಪೋಷಕರು ಖಾಸಗಿ ಶಾಲೆಗಳ ವ್ಯಾಮೋಹದಿಂದ ಹೊರಬರುತ್ತಿಲ್ಲ. ಸರ್ಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿ ಮಹತ್ತರ ಸಾಧನೆ ಮಾಡಿದ ಅನೇಕರ ನಮ್ಮ ಮಧ್ಯೆ ಇದ್ದಾರೆ. ಆದ್ದರಿಂದ ತಮ್ಮ ಮಕ್ಕಳನ್ನು ಸರ್ಕಾರಿ ಶಾಲಾ ಕಾಲೇಜಿಗೆ ಸೇರಿಸಬೇಕು ಎಂದು ಸಲಹೆ ನೀಡಿದರು. ಇತ್ತೀಚಿನ ದಿನಗಳಲ್ಲಿ ಸರ್ಕಾರ ಕೂಡ ಬಾಲ್ಯದಿಂದಲೇ ಮಕ್ಕಳನ್ನು ಸದೃಢರಾಗಿ ಮಾಡುವ ನಿಟ್ಟಿನಲ್ಲಿ ವಿವಿಧ ಗುಣಮಟ್ಟದ ಆಹಾರ ಪದಾರ್ಥಗಳನ್ನು ಒದಗಿಸುವ ಜೊತೆಗೆ ಮಕ್ಕಳಿಗೆ ಅನುಕೂಲಕರ ವಾತಾವರಣ ಸೃಷ್ಟಿ ಮಾಡಲು ಮುಂದಾಗಿದೆ. ಇದರ ಸದುಪಯೋಗವನ್ನು ಎಲ್ಲರೂ ಪಡೆಯಬೇಕು ಎಂದು ಕಿವಿಮಾತು ಹೇಳಿದರು. ಚಿಪ್ಪಿನಕಟ್ಟೆ ಹಾಗೂ ಟಿಪ್ಪು ನಗರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಲ್ಪಸಂಖ್ಯಾತರ ಮಕ್ಕಳು ಇದ್ದು ಅವರಿಗೂ ಶಾಲಾ ಪೂರ್ವ ಶಿಕ್ಷಣ ಒಳ್ಳೆಯ ರೀತಿಯಲ್ಲಿ ಸಿಗಬೇಕು ಎಂಬುದು ನಮ್ಮ ಆಶಯ. ಹಾಗಾಗಿ ಸುಸಜ್ಜಿತ ಕಟ್ಟಡ ನಿರ್ಮಾಣ ಮಾಡಿ ಮಕ್ಕಳ ವಿದ್ಯಾಭ್ಯಾಸಕ್ಕೆ ಕ್ರಮ ಕೈಗೊಳ್ಳಲಾಗಿದೆ. ತಮ್ಮ ಮನೆ ಎಂಬಂತೆ ಭಾವಿಸಿ ಕಟ್ಟಡ ಮತ್ತು ಸೌಲಭ್ಯಗಳನ್ನು ಕಾಪಾಡಬೇಕು ಎಂದರು.

ಮೇಯರ್ ಎಂ. ಚಂದ್ರೇಗೌಡ, ಉಪಮೇಯರ್ ಹೇಮಲತಾ ಕಮಲ್ ಕುಮಾರ್, ತಾಲ್ಲೂಕು ಶಿಶು ಯೋಜನಾ ಅಭಿವೃದ್ಧಿ ಅಧಿಕಾರಿ ಜ್ಯೋತಿ ಹಾಗೂ ಇತರರಿದ್ದರು.

## ಕುಟುಂಬಸ್ಥರ ಕೊಲೆಗೆ ಯತ್ನಿಸಿದ್ದ ಮಹಿಳೆ ಬಂಧನ

ಬೇಲೂರು: ಅನೈತಿಕ ಸಂಬಂಧಕ್ಕೆ ಅಡ್ಡಿಯಾಗುತ್ತಿದ್ದಾರೆಂದು ಊಟದಲ್ಲಿ ಮಾತ್ರೆ ಹಾಕಿ ಕೊಲೆಗೆ ಯತ್ನಿಸಿದ್ದ ಪ್ರಕರಣ ಸಂಬಂಧ ಮಹಿಳೆಯನ್ನು ಪೊಲೀಸರು ಬಂಧಿಸಿದ್ದಾರೆ.

ತಾಲ್ಲೂಕಿನ ಕೆರಳೂರು ಗ್ರಾಮದ ಚೈತ್ರ ಬಂಧಿತ ಆರೋಪಿ.

ಅಕ್ರಮ ಸಂಬಂಧಕ್ಕೆ ತೊಂದರೆಯಾಗುತ್ತಿದ್ದಾರೆಂದು ಪ್ರಿಯಕರನ ಜೊತೆಗೂಡಿ ಗಂಡ, ಅತ್ತೆ ಮಾವ ಹಾಗೂ ಮಕ್ಕಳಿಗೆ ಊಟದಲ್ಲಿ ಮಾತ್ರೆ ಹಾಕಿ ಕೊಲೆಗೆ ಪ್ರಯತ್ನಿಸಿದ್ದಳು ಎನ್ನಲಾಗಿದೆ.

11 ವರ್ಷಗಳ ಹಿಂದೆ ಇಬ್ಬರೂ ಮದುವೆಯಾಗಿದ್ದು ಇಬ್ಬರು ಗಂಡು ಮಕ್ಕಳಿದ್ದಾರೆ. ಆರಂಭದಲ್ಲಿ ಗಂಡನ ಮನೆಯವರೊಂದಿಗೆ ಪರಸ್ಪರ ಪ್ರೀತಿ ವಿಶ್ವಾಸದಿಂದಲೇ ಇದ್ದ ಚೈತ್ರ ಇತ್ತೀಚೆಗೆ ವರಸೆ ಬದಲಿಸಿದ್ದಳು. ಪುನೀತ್ ಎಂಬ ವ್ಯಕ್ತಿಯ ಪರಿಚಯವಾದ ಬಳಿಕ ಮಕ್ಕಳನ್ನು ವಿನಾಕಾರಣ ಬೈಯುವುದು ಗಂಡನ ಜೊತೆ ಸಣ್ಣಪುಟ್ಟ ವಿಚಾರಕ್ಕೆ ಗಲಾಟೆ ಮಾಡುತ್ತಿದ್ದಳು. ಚೈತ್ರ ಹಾಗು ಪುನೀತ್ ನಡುವಿನ ಅನೈತಿಕ ಸಂಬಂಧ ವಿಚಾರ ತಿಳಿದ ಗಂಜೇಂದ್ರ, ಅವರು ಚೈತ್ರ ತಂದೆ ತಾಯಿಗೆ ವಿಷಯ ತಿಳಿಸಿ ಬುದ್ಧಿವಾದ ಹೇಳಿದ್ದರು.

ಆದರೆ ಚೈತ್ರ ತನ್ನ ವರಸೆ ಬದಲಿಸದೆ ಮತ್ತೆ ಶಿವು ಎಂಬಾತನ ಜೊತೆ ಅಕ್ರಮ ಸಂಬಂಧ ಮುಂದುವರೆಸಿದ್ದಳು. ಇದಕ್ಕೆ ಕುಟುಂಬಸ್ಥರು ಅಡ್ಡಿಯಾಗುತ್ತಿದ್ದಾರೆಂದು ಅವರ ಕೊಲೆಗೆ ಯೋಜನೆ ರೂಪಿಸಿ ಊಟದಲ್ಲಿ ವಿಷದ ಮಾತ್ರೆ ಹಾಕಲು ತಯಾರಿ ಮಾಡಿಕೊಂಡಿದ್ದಳು. ವಿಚಾರ ತಿಳಿದ ಗಜೇಂದ್ರ, ಅವರು ಊಟ ಮಾಡದೆ ಪ್ರಾಣಾಪಾಯದಿಂದ ಪಾರಾಗಿರುವುದಲ್ಲದೆ ಕುಟುಂಬಸ್ಥರನ್ನು ಕಾಪಾಡಿದ್ದಾರೆ. ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಎಪಿಜೆ ಕಾಲೇಜಿನ ಐದು ವಿದ್ಯಾರ್ಥಿಗಳು ಐಐಟಿಗೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ನಗರದ ಎಪಿಜೆ ಪಿಯು ಕಾಲೇಜಿನ ಐವರು ವಿದ್ಯಾರ್ಥಿಗಳು ರಾಷ್ಟ್ರ ಮಟ್ಟದ ಎಂಜಿನೀಯರಿಂಗ್ ವಿಭಾಗದ ಜೆಇಇ ಅಡ್ವಾನ್ಸ್ ಪ್ರವೇಶ ಪರೀಕ್ಷೆಯಲ್ಲಿ ಅತ್ಯುತ್ತಮ ರ್‍ಯಾಂಕ್ ಮೂಲಕ ಐತಿಹಾಸಿಕ ಸಾಧನೆ ಮಾಡಿದ್ದಾರೆ ಎಂದು ಕಾಲೇಜಿನ ಸಂಸ್ಥಾಪಕ ಕಾರ್ಯದರ್ಶಿ ಡಿ. ಮುರಳಿ ಹೇಳಿದರು.

ಸುದ್ದಿಗೋಷ್ಠಿಯಲ್ಲಿ ಮಂಗಳವಾರ ಮಾತನಾಡಿ, ಹಾಸನ ನಗರ ಹಾಗೂ ಜಿಲ್ಲೆಯಲ್ಲಿಯೇ ಪ್ರಪ್ರಥಮ ಬಾರಿಗೆ ನಮ್ಮೂರಿನ ವಿದ್ಯಾರ್ಥಿಗಳು ಪ್ರತಿಷ್ಠಿತ ಐಐಟಿ ಪ್ರವೇಶ ಪಡೆದ ಖ್ಯಾತಿಗೆ ಭಾಜರಾಗಿದ್ದಾರೆ. ಕಳೆದ ಏಪ್ರಿಲ್ ನಲ್ಲಿ ಜೆಇಇ ಅಡ್ವಾನ್ಸ್ ಪ್ರವೇಶ ಪರೀಕ್ಷೆ ನಡೆದು, ಈಗ ಫಲಿತಾಂಶ ಪ್ರಕಟಗೊಂಡಿದೆ. ಅರಸೀಕೆರೆ ರಸ್ತೆಯ ಬಿ.ಕಾಟೀಹಳ್ಳಿಯಲ್ಲಿರುವ ಉನ್ನತಿ ಶಿಕ್ಷಣ ಸಂಸ್ಥೆಯ ಎಪಿಜೆ ಪಿಯು ಕಾಲೇಜು ಜಿಲ್ಲೆಗೆ ಉತ್ತಮ ಕೊಡುಗೆ ನೀಡಿದೆ ಎಂದರು.

ಕಾಲೇಜಿನ ಐವರು ಪ್ರತಿಭಾವಂತ ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿಗಳಿಸಿ ತಮ್ಮ ಕನಸಿನ (ಮದ್ರಾಸ್, ಕಾನ್ಪುರ, ಹೈದ್ರಾಬಾದ್) ಐಐಟಿ ಕಾಲೇಜುಗಳಿಗೆ ಪ್ರವೇಶ ಪಡೆಯಲು ಸಿದ್ಧರಾಗಿದ್ದಾರೆ ಎಂದು ತಿಳಿಸಿದರು. ಮೋಹಿತ್ ಎಂ.ನಾಯಕ್ ಮತ್ತು ಎಸ್.ಎಸ್. ತನ್ಮಯಿ ರಾಷ್ಟ್ರಮಟ್ಟದ ಕೆಟಗರಿ ಶ್ರೇಣಿಯಲ್ಲಿ ಕ್ರಮವಾಗಿ 377 ಹಾಗೂ 390ನೇ ಸ್ಥಾನ ಗಿಟ್ಟಿಸಿದ್ದಾರೆ. ಎಂ.ಎನ್. ಪ್ರಶಾಂತ್ ಕುಮಾರ್ 10,037ನೇ ಸ್ಥಾನ ಪಡೆದರೆ, ಪ್ರಜ್ವಲ್ ವಿ.ಜೋಯಿಸ್ 12,029 ಮತ್ತು ಮಹಮ್ಮದ್ ಯೂಸುಫ್ 12,076ನೇ ರ್‍ಯಾಂಕ್ ಪಡೆದು ರಾಷ್ಟ್ರ ಮಟ್ಟದ ಸ್ಥಾನ ತಮ್ಮದಾಗಿಸಿಕೊಂಡಿದ್ದಾರೆ ಎಂದು ವಿವರಿಸಿದರು. ಜಿಲ್ಲೆಯಿಂದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಕೇವಲ ಎನ್ ಐಟಿ ಎಂಜಿನೀಯರಿಂಗ್ ಕಾಲೇಜಿಗೆ ಮಾತ್ರ ಪ್ರವೇಶ ಪಡೆದಿದ್ದಾರೆ. ಆದರೆ ಇದೇ ಪ್ರಪ್ರಥಮ ಬಾರಿಗೆ ಜಿಲ್ಲೆಯ ಐವರು ವಿದ್ಯಾರ್ಥಿಗಳು ಪ್ರತಿಷ್ಠಿತ ಐಐಟಿ ಕಾಲೇಜುಗಳಿಗೆ ಪ್ರವೇಶ ಪಡೆದಿರುವುದು ಹೆಮ್ಮೆಯ ವಿಷಯ ಎಂದರು.

ಇದೇ ವಿದ್ಯಾರ್ಥಿಗಳು ಕೆ-ಸಿಇಟಿ ಪರೀಕ್ಷೆಗಳಲ್ಲೂ ಸಾವಿರಕ್ಕೂ ಕಡಿಮೆ ರ್‍ಯಾಂಕ್ ಪಡೆದಿದ್ದಾರೆ. ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ನಮ್ಮ ಕಾಲೇಜಿನಿಂದಲೇ ಸಂಪೂರ್ಣ ತರಬೇತಿ ಪಡೆದು ಇನ್ನಷ್ಟು ಪ್ರತಿಭಾವಂತ ವಿದ್ಯಾರ್ಥಿಗಳು ದೇಶದ ಪ್ರತಿಷ್ಠಿತ ಎಂಜಿನೀಯರಿಂಗ್ ಮತ್ತು ಮೆಡಿಕಲ್ ಕಾಲೇಜುಗಳಿಗೆ ಪ್ರವೇಶ ಪಡೆಯಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ಸಿ.ಕೆ.ದೇವರಾಜು ಹಾಗೂ ವಿದ್ಯಾರ್ಥಿಗಳು ಇದ್ದರು.

## ಸಕಲೇಶಪುರ-ಸುಬ್ರಹ್ಮಣ್ಯ ರೈಲ್ವೆ ಹಳಿ ಪರಿಶೀಲನೆ

ಸಕಲೇಶಪುರ: ಮಲೆನಾಡು ಭಾಗದ ಘಾಟ್ ಪ್ರದೇಶ ಮಾರ್ಗದ ಸಕಲೇಶಪುರ-ಸುಬ್ರಹ್ಮಣ್ಯ ರೈಲ್ವೆ ಹಳಿಯನ್ನು ನೈರುತ್ಯ ರೈಲ್ವೆ ಪ್ರಧಾನ ವ್ಯವಸ್ಥಾಪಕ ಮುಕುಲ್ ಸರನ್ ಮಾಥುರ್ ಪರಿಶೀಲಿಸಿದರು.

ಕಳೆದ ವರ್ಷ ಸುರಿದ ಭಾರೀ ಮಳೆಗೆ ಬೆಂಗಳೂರು-ಮಂಗಳೂರು ರೈಲು ಸಂಚಾರದಲ್ಲಿ ವ್ಯತ್ಯಯವಾಗಿತ್ತು. ಆ ಹಿನ್ನೆಲೆಯಲ್ಲಿ ಸ್ಥಳ ಪರಿಶೀಲನೆ ನಡೆಸಿ ಸ್ಥಳೀಯ ಅಧಿಕಾರಿಗಳಿಗೆ ಮಾರ್ಗದರ್ಶನ ನೀಡಿದರು.

ಜೊತೆಗೆ ಅಮೃತ ಭಾರತ್ ನಿಲ್ದಾಣ ಯೋಜನೆಯಡಿ ಪುನರಾಭಿವೃದ್ಧಿ ಆಗುತ್ತಿರುವ ಸುಬ್ರಹ್ಮಣ್ಯ ರಸ್ತೆ, ಸಕಲೇಶಪುರ ಮತ್ತು ಹಾಸನ ರೈಲು ನಿಲ್ದಾಣ



ಪರಿಶೀಲಿಸಿದರು. ನಿಲ್ದಾಣ ಪುನರಾಭಿವೃದ್ಧಿ ಕಾಮಗಾರಿ ಪ್ರಗತಿ ಪರಿಶೀಲಿಸಿ ಎಲ್ಲಾ ಕಾರ್ಯಗಳು ಸಕಾಲದಲ್ಲಿ ಹಾಗು ಗುಣಮಟ್ಟದೊಂದಿಗೆ ಪೂರ್ಣಗೊಳಿಸಬೇಕೆಂದು ಸೂಚಿಸಿದರು.

## ಗ್ರಾಮೀಣ ಭಾಗದಲ್ಲಿ ಪ್ರಾಚೀನ ಕಲೆ ಜೀವಂತ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ರುದ್ರಪಟ್ಟಣ: ಆಧುನಿಕತೆ ಬೆಳೆದಂತೆ ಪ್ರಾಚೀನ ಕಲೆ ನಶಿಸಿ ಹೋಗುತ್ತಿದೆ ಎಂಬ ಆತಂಕದ ಮಧ್ಯೆಯೇ ಪೌರಾಣಿಕ ನಾಟಕಗಳ ಪ್ರದರ್ಶನವಾಗುತ್ತಿರುವುದು ಆಶಾದಾಯಕ ಬೆಳವಣಿಗೆ ಎಂದು ವಕೀಲ ಆರ್.ಕೆ. ಮಂಜುನಾಥ್ ತಿಳಿಸಿದರು.

ಅರಕಲಗೂಡು ತಾಲ್ಲೂಕಿನ ರಾಮನಾಥಪುರ ಹೋಬಳಿ ರುದ್ರಪಟ್ಟಣ ಗ್ರಾಮದಲ್ಲಿ ಶ್ರೀ ಲಕ್ಷ್ಮೀದೇವಿ ಕೃಪಾಪೋಷಿತ ನಾಟಕ ಮಂಡಳಿಯಿಂದ ಇತ್ತೀಚೆಗೆ ಹಮ್ಮಿಕೊಂಡಿದ್ದ ಶ್ರೀ ಶನಿ ಪ್ರಭಾವ ಪೌರಾಣಿಕ ನಾಟಕ ಪ್ರದರ್ಶನಕ್ಕೆ ಚಾಲನೆ ನೀಡಿ ಮಾತನಾಡಿ, ಪೌರಾಣಿಕ ನಾಟಕಗಳು ಜೀವನ ಸಂದೇಶ ಸಾರುತ್ತವೆ. ಒಳಿತು ಕೆಡುಕು, ಸಜ್ಜನರ ಸಹವಾಸ, ಸತ್ಕಾರ್ಯಗಳಲ್ಲಿ ಸಾಗುವುದನ್ನು ನಮ್ಮ ಪರಂಪರೆ ಹೇಳುತ್ತದೆ. ಮೊಬೈಲ್ ಗೀಳಿಗೆ ಬಿದ್ದಿರುವ ಯುವ ಸಮಾಜ ಮಾನವೀಯತೆಯನ್ನು ಮರೆಯುತ್ತಿದೆ. ಗ್ರಾಮೀಣ ಪ್ರದೇಶಗಳಲ್ಲಿ ಸಂಸ್ಕಾರ ಉಳಿದಿದೆ ಎಂದರೆ ಅದಕ್ಕೆ ಈ ರೀತಿಯ ಕಾರ್ಯಕ್ರಮಗಳೇ ಸಾಕ್ಷಿ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಸಾಗರ್ ಮಾತನಾಡಿ, ನಾಟಕದಲ್ಲಿ ಬರುವ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಸಹಬಾಳ್ವೆ ಬದುಕು ಸಾಗಿಸಬೇಕು. ಪೂರ್ವಜರ ಕಾಲದಿಂದಲೂ ಬೆಳೆದುಕೊಂಡು ಬಂದಿರುವ ನಾಟಕ ಕಲೆಯನ್ನು ಮುಂದಿನ ತಲೆಮಾರಿಗೂ ಉಳಿಸಿ ಬೆಳೆಸುವ ಕೆಲಸ ಎಲ್ಲರಿಂದ ಆಗಬೇಕು. ಉತ್ತಮ ಮೌಲ್ಯ ಹಾಗೂ ಸಂದೇಶ ಸಾರುವ ನಾಟಕಗಳು ಪೂರ್ವಜರ ಕೊಡುಗೆ ಎಂದು ಹೇಳಿದರು.

ರಾಜ್ಯ ಪ್ರಶಸ್ತಿ ಪುರಸ್ಕೃತ ಶಿಕ್ಷಕ ಎ.ಬಿ. ಮೂರ್ತಿ ಮಾತನಾಡಿ, ಒಂದು ಕಾಲದಲ್ಲಿ ಪೌರಾಣಿಕ ನಾಟಕಗಳು ಗ್ರಾಮೀಣ ಜನರಿಗೆ ಮನರಂಜನೆಯ ಬಹುಮುಖ್ಯ ಮಾಧ್ಯಮಗಳಾಗಿದ್ದವು. ನಾಟಕಗಳ ಮೂಲಕ ನಮ್ಮ ಹಿರಿಯರು ಜೀವನ ಮೌಲ್ಯಗಳನ್ನು ಮಕ್ಕಳಿಗೆ ತಿಳಿಸಿಕೊಡುತ್ತಾ ಬದುಕಿನ ಸನ್ಮಾರ್ಗ ತೋರಿಸುತ್ತಿದ್ದರು. ಪುರಾಣದ ಪಾತ್ರಗಳ ಮೂಲಕ ಬದುಕಿನ ಆದರ್ಶಗಳನ್ನು ಮಕ್ಕಳ ಮನಸ್ಸಿಗೆ ತುಂಬಿಸುತ್ತಾ ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಬೇರುಗಳನ್ನು ಗಟ್ಟಿಗೊಳಿಸುತ್ತಿದ್ದರು. ಇಂದು ಮೊಬೈಲ್ ಸಂಸ್ಕೃತಿ ಎಲ್ಲವನ್ನೂ ಮರೆಮಾಚುತ್ತಿದೆ ಎಂದು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಹೆಚ್.ಆರ್. ನಂದೀಶ್, ಸದಸ್ಯರಾದ ಆರ್.ಪಿ. ನಿತಿನ್, ರೂಪ ಶಿವಶಂಕರ್, ಪಲ್ಲವಿ ರಾಘವೇಂದ್ರ, ಮಂಜುಳ ನರಸಿಂಹ, ಮಂಜುಳ ಕುಮಾರನಾಯಕ ಹಾಗೂ ಇತರರಿದ್ದರು.

## ಲಿಟಲ್ ಮಿಲೇನಿಯಮ್ ಶಾಲೆಯಲ್ಲಿ ಸೈಕಲ್ ದಿನ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಪಟ್ಟಣದ ಆದರ್ಶ ನಗರದಲ್ಲಿರುವ ಲಿಟಲ್ ಮಿಲೇನಿಯಮ್ ಸ್ಕೂಲ್‌ನಲ್ಲಿ ವಿಶ್ವ ಸೈಕಲ್ ದಿನಾಚರಣೆಯನ್ನು ಮಂಗಳವಾರ ಆಚರಿಸಲಾಯಿತು.

ಎಲ್ಲಾ ಮಕ್ಕಳು ತಮ್ಮ ಸೈಕಲ್‌ಗಳೊಂದಿಗೆ ಉಲ್ಲಾಸದಿಂದ ಭಾಗವಹಿಸಿ ರ್‍ಯಾಲಿಯಲ್ಲಿ ಪಾಲ್ಗೊಂಡರು. ಈ ಚಟುವಟಿಕೆಯ ಮೂಲಕ ಮಕ್ಕಳಲ್ಲಿ ಆರೋಗ್ಯದ ಮಹತ್ವ, ಸಮತೋಲನ ಹಾಗೂ ಪರಿಸರದ ಪ್ರೀತಿಯನ್ನು ಉತ್ತೇಜಿಸಲಾಯಿತು.

ಸೈಕಲ್ ರ್‍ಯಾಲಿಯು ಮಕ್ಕಳಿಗೆ ಆನಂದ ಹಾಗೂ ಕಲಿಕಾ ಅನುಭವ ನೀಡಿತು. ಪೋಷಕರ ಸಹಕಾರದಿಂದ ಈ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಲಿಟಲ್ ಮಿಲೇನಿಯಮ್ ಸಂಸ್ಥೆಯ ಮುಖ್ಯಸ್ಥೆ ಸುಷ್ಮ ಮಂಜುನಾಥ್, ಶಾಲೆಯ ಶಿಕ್ಷಕ ವೃಂದ ಹಾಗೂ ಪಾಲಕರು ಸೇರಿದಂತೆ ಇತರರು ಹಾಜರಿದ್ದರು.

# ಬಾಲ್ಯ ವಿವಾಹ ತಡೆ ನಿರ್ಲಕ್ಷ್ಯ ಬೇಡ

## ಕೆಲಸ ಮಾಡದ ಸಿಬ್ಬಂದಿ ವೇತನಕ್ಕೆ ಕೋಕ್ | ಜಿಲ್ಲಾಧಿಕಾರಿ ಎಚ್ಚರಿಕೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯಲ್ಲಿ ಬಾಲ್ಯ ವಿವಾಹ ತಡೆಗಟ್ಟಲು ಮುಂಜಾಗ್ರತೆ ವಹಿಸಿ ಎಚ್ಚರಿಕೆಯಿಂದ ಕರ್ತವ್ಯ ನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಮಕ್ಕಳ ಕಲ್ಯಾಣ ಸಮಿತಿ, ಮಕ್ಕಳ ಸಹಾಯವಾಣಿ, ಜಿಲ್ಲಾ ಮಕ್ಕಳಾ ರಕ್ಷಣಾ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, ಮಕ್ಕಳ ಸಹಾಯವಾಣಿಗೆ ಕರೆ ಬಂದ ತಕ್ಷಣ ಸ್ಥಳಕ್ಕೆ ಹೋಗಿ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳಬೇಕು. ಈ ವಿಚಾರದಲ್ಲಿ ನಿರ್ಲಕ್ಷ್ಯ ವಹಿಸಿದರೆ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.




ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು ಗಮನಹರಿಸಿ ಹೆಚ್ಚು ಬಾಲ್ಯ ವಿವಾಹ ನಡೆಯುತ್ತಿರುವ ಬಗ್ಗೆ ಗುರುತಿಸಿ ಸ್ಥಳೀಯ ಸಮುದಾಯದ ಮುಖಂಡರನ್ನು ಸೇರಿಸಿ ಅರಿವು ಮೂಡಿಸಲು ಕ್ರಮವಹಿಸಲು ಸೂಚಿಸಿದರು.

ಬಾಲ್ಯ ವಿವಾಹ ಮತ್ತಿತರ ವಿಷಯಗಳ ಬಗ್ಗೆ ಗಮನಹರಿಸಿ ಸೂಕ್ತವಾಗಿ ಕೆಲಸ ಮಾಡುತ್ತಿಲ್ಲದ ಅಧಿಕಾರಿ ಹಾಗೂ ಸಿಬ್ಬಂದಿ ಒಂದು ತಿಂಗಳ ವೇತನ ಕಡಿತಗೊಳಿಸಲು ಕ್ರಮವಹಿಸುವಂತೆ ಜಿಲ್ಲಾ ಮಕ್ಕಳಾ ರಕ್ಷಣಾ ಅಧಿಕಾರಿಗೆ ಸೂಚಿಸಿದರು.

ಪ್ರತ್ಯೇಕ ವಹಿಯಲ್ಲಿ ದಾಖಲಿಸಿ ನಿರ್ವಹಣೆ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಪ್ರತಿ ತಿಂಗಳು ಸಭೆ ನಡೆಸುವಂತೆ ನಿರ್ದೇಶನ ನೀಡಿರಲ್ಲದೆ ಬಾಲ್ಯ ವಿವಾಹ ಕುರಿತು ಪ್ರಕರಣ ದಾಖಲಾದ ನಂತರ ಇತ್ಯರ್ಥವಾಗುವವರೆಗೂ ಗಮನಹರಿಸುವಂತೆ ಸೂಚಿಸಿದರು.

ಶಾಲೆಯಿಂದ ಹೊರಗುಳಿದ ಮಕ್ಕಳ ಬಗ್ಗೆ ಎಚ್ಚರವಿರಲಿ ಬಾಲ್ಯ ವಿವಾಹವಾಗಿದ್ದಾರ ಎಂಬುದಾಗಿ ಪರಿಶೀಲನೆ ಮಾಡುವಂತೆ ಸೂಚಿಸಿದರು.

ಬಾಲ್ಯ ವಿವಾಹ, ಕಾಣೆಯಾದ ಮಕ್ಕಳು, ಭಿಕ್ಷಾಟನೆ, ಬಾಲ ಕಾರ್ಮಿಕರು ಹೀಗೆ ಪ್ರತಿಯೊಂದು ವಿಷಯಕ್ಕೆ ಸಂಬಂಧಿಸಿದಂತೆ ಪ್ರತ್ಯೇಕವಾಗಿ ವಹಿಯಲ್ಲಿ ದಾಖಲಿಸಿ ನಿರ್ವಹಣೆ ಮಾಡುವಂತೆ ಜಿಲ್ಲಾ ಮಕ್ಕಳ ರಕ್ಷಣಾ ಅಧಿಕಾರಿಗೆ ಸೂಚಿಸಿದರಲ್ಲದೆ, ಪ್ರತಿನಿತ್ಯ ಬಾಲಕರ ಬಾಲ ಮಂದಿರ ಹಾಗೂ ಬಾಲಕಿಯರ ಬಾಲ ಮಂದಿರಕ್ಕೆ ಭೇಟಿ ನೀಡುವಂತೆ ತಿಳಿಸಿದರು.

ಮಕ್ಕಳ ಪಾಲನಾ ಸಂಸ್ಥೆಗಳಲ್ಲಿರುವ ಪ್ರತಿಯೊಂದು ಮಗುವಿನ ಬಗ್ಗೆ ಸಂಪೂರ್ಣ ಮಾಹಿತಿ ನೀಡಲು ನಿರ್ದೇಶನ ನೀಡಿದರು.

ನಿರಂತರವಾಗಿ ಪೊಲೀಸ್ ಇಲಾಖೆಯೊಂದಿಗೆ ಸಂಪರ್ಕವಿಟ್ಟುಕೊಂಡು ಎಲ್ಲೆಲ್ಲಿ ಹೆಚ್ಚು ಬಾಲ್ಯ ವಿವಾಹ ನಡೆಯುತ್ತಿವೆ ಅವುಗಳ ಬಗ್ಗೆ ಹೆಚ್ಚಿನ ನಿಗಾ ವಹಿಸಲು ಸೂಚನೆ ನೀಡಿದರು.

ಬಾಲ್ಯ ವಿವಾಹ ನಿಷೇಧ, ಪೋಕ್ಸೋ ಕಾಯ್ದೆ, ಮಕ್ಕಳ ಹಕ್ಕುಗಳ ಸಂರಕ್ಷಣೆ, ಮಕ್ಕಳ ಕಳ್ಳಸಾಗಣೆ ಮತ್ತಿತರ ವಿಷಯಗಳ ಕುರಿತು ಸಂಬಂಧಿತ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಮನ್ವಯತೆ ಯಿಂದ ಕರ್ತವ್ಯ ನಿರ್ವಹಿಸಲು ಜಿಲ್ಲಾಧಿಕಾರಿ ಸಿ. ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ದಾಕ್ಷಾಯಿಣಿ ಮಾತನಾಡಿ, ಬಾಲ್ಯ ವಿವಾಹ ತಡೆಗಟ್ಟಲು ಗ್ರಾಮೀಣ ಪ್ರದೇಶದಲ್ಲಿ ಅರಿವು ಮೂಡಿಸಲು ಕ್ರಮ ವಹಿಸುವಂತೆ ಸೂಚಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ತಮ್ಮಯ್ಯ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಸಮಿತಿ ಸದಸ್ಯರಾದ ರೂಪ ಹಾಸನ, ಕೆ.ಟಿ. ಜಯಶ್ರೀ ಇತರರಿದ್ದರು.

# ಅರಸೀಕೆರೆಯಲ್ಲಿ ಅಹಲ್ಯಬಾಯಿ ಜನ್ಮ ದಿನಾಚರಣೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**


ಅರಸೀಕೆರೆ: ಮಹಿಳೆ ದುರ್ಬಲಳು ಎನ್ನುತ್ತಿದ್ದ ಕಾಲಘಟ್ಟದಲ್ಲಿ ಸ್ತ್ರೀ ದುರ್ಬಲ ಅಲ್ಲ ಪ್ರಬಲಳು ಎಂಬ ಸಂದೇಶವನ್ನು ಜಗತ್ತಿಗೆ ಸಾರಿದ ಅಹಲ್ಯಬಾಯಿ ಹೋಳ್ಕರ್ ಸ್ತ್ರೀ ಶಕ್ತಿಯ ದ್ಯೋತಕ ಎಂದು ಅಹಲ್ಯಾಬಾಯಿ ಹೋಳ್ಕರ್ ಸಂಘದ ಅಧ್ಯಕ್ಷೆ ಶಿಲ್ಪ ಚಂದ್ರು ಬಾಣಾವರ ಹೇಳಿದರು.

ಸಹಕಾರ ಸಂಘದ ಕಚೇರಿಯಲ್ಲಿ ಆಯೋಜಿಸಿದ್ದ ಅಹಲ್ಯಾಬಾಯಿ ಹೋಳ್ಕರ್ ಅವರ 300ನೇ ವರ್ಷದ ಜಯಂತೋತ್ಸವದಲ್ಲಿ ಮಾತನಾಡಿ, ರಾಜಮಾತೆಯಾಗಿದ್ದ ಅಹಲ್ಯಾಬಾಯಿ ಹೋಳ್ಕರ್, ಮಹಿಳೆಯರ ಸಬಲೀಕರಣಕ್ಕೆ ನೀಡಿದ ಕೊಡುಗೆ ಹಾಗೂ ಹಿಂದುಗಳ ಪವಿತ್ರ ಧಾರ್ಮಿಕ ಯಾತ್ರಾ ಕ್ಷೇತ್ರವಾಗಿರುವ ಕಾಶಿ ದೇವಾಲಯದ ಜೀರ್ಣೋದ್ಧಾರ ಮಾಡಿದ ರೀತಿ ಹೀಗೆ ಅವರಲ್ಲಿದ್ದ ಸಾಮಾಜಿಕ ಕಳಕಳಿಯಿಂದಲೇ ಅವರು ದೈಹಿಕವಾಗಿ ನಮ್ಮೊಂದಿಗೆ ಇಲ್ಲದೆ ಇದ್ದರೂ ನಮ್ಮೆಲ್ಲರಿಗೂ ಆದರ್ಶರಾಗಿದ್ದಾರೆ ಎಂದರು.

ಸಂಘದ ಉಪಾಧ್ಯಕ್ಷೆ ಕಾವ್ಯ ಮಾತನಾಡಿ, ಅಹಲ್ಯಬಾಯಿ ಹೋಳ್ಕರ್ ಅವರ ಹೆಸರಿನಲ್ಲಿ ನಾವು ಸ್ಥಾಪಿಸಿಕೊಂಡಿರುವ ಸಹಕಾರ ಸಂಘವು ಕೇವಲ ಹಣದ ವ್ಯವಹಾರವನ್ನು ಮಾತ್ರ ಮಾಡುತ್ತಿಲ್ಲ. ಅಹಲ್ಯಬಾಯಿ ಹೋಳ್ಕರ್ ಅವರ ಸಂದೇಶವನ್ನು ಸಹಕಾರ ಸಂಘವು ಪಾಲಿಸುತ್ತಾ ಜೊತೆಗೆ ಸಮಾಜದ ಮಹಿಳೆಯರನ್ನ ಸಂಘಟಿಸುವ ಕೆಲಸ ಮಾಡುತ್ತಾ ಅಹಲ್ಯಾಬಾಯಿ ಹೋಳ್ಕರ್ ಅವರಿಗೆ ಗೌರವ ಸಮರ್ಪಿಸುತ್ತಿದ್ದೇವೆ ಎಂದರು.

ಸಹಕಾರ ಸಂಘದ ಗೌರವ ಅಧ್ಯಕ್ಷೆ ಯಶೋಧಮ್ಮ, ನಿರ್ದೇಶಕರಾದ ಯಮುನಾ, ಮೀನಾಕ್ಷಮ್ಮ, ವನಜಾಕ್ಷಿ, ಲಲಿತಮ್ಮ, ನೇತ್ರಾವತಿ, ಚೇತನಾ, ಗೀತಾಮಣಿ, ವಿಶಾಲಾಕ್ಷಿ, ಕಾರ್ಯದರ್ಶಿ ಭಾಗ್ಯಲಕ್ಷ್ಮಿ, ಕುರುಬ ಸಮಾಜದ ಮುಖಂಡ ಚಂದ್ರು ಬಾಣಾವರ, ವಿಜಯ್ ಕುಮಾರ್, ತಿಮ್ಮೇಗೌಡ ಹಾಗೂ ಇತರರಿದ್ದರು.

# ಸಾಹಿತಿ ವೆಂಕಟೇಶಮೂರ್ತಿ ನಿಧನ: ಶ್ರದ್ಧಾಂಜಲಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಇತ್ತೀಚೆಗೆ ನಿಧನರಾದ ಸಾಹಿತಿ ಹೆಚ್.ಎಸ್. ವೆಂಕಟೇಶಮೂರ್ತಿ ಅವರಿಗೆ ಪಟ್ಟಣದ ಶಾಲಿನಿ ಅಂತರಾಷ್ಟ್ರೀಯ ಶಾಲೆ ಹಾಗು ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ ವತಿಯಿಂದ ಶ್ರದ್ಧಾಂಜಲಿ ಸಲ್ಲಿಸಲಾಯಿತು.

ಮಕ್ಕಳ ಸಾಹಿತ್ಯ ಪರಿಷತ್ ರಾಜ್ಯಾಧ್ಯಕ್ಷ ಚ.ನಾ. ಅಶೋಕ್ ಮಾತನಾಡಿ, ವೆಂಕಟೇಶಮೂರ್ತಿ ಅವರ ದೇಹ ನಮ್ಮೊಂದಿಗೆ ಇಲ್ಲವಾಗಿರಬಹುದು. ಆದರೆ ಸಾಹಿತ್ಯ, ಭಾವಗೀತೆಗಳು ನಮ್ಮೊಂದಿಗಿದೆ ಅಚಲವಾಗಿ ಇರುತ್ತವೆ ಎಂದು ಹೇಳಿದರು.

ಹೆಚ್.ಎಸ್. ವೆಂಕಟೇಶಮೂರ್ತಿ ಮಕ್ಕಳಿಗೆ ಆದರ್ಶವಾಗಬೇಕು. ಕನ್ನಡ ಸಾಹಿತ್ಯಕ್ಕೆ ಮಕ್ಕಳ ಸಾಹಿತ್ಯಕ್ಕೆ ಅವರು ನೀಡಿದ ಕೊಡುಗೆ ಅಪಾರವಾದದ್ದು. ಹಾಸನದಲ್ಲಿ ನಡೆದ ಮಕ್ಕಳ ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸಿ ಮಕ್ಕಳಿಗೆ ಮಾರ್ಗದರ್ಶನ ಮಾಡಿದ್ದನ್ನು ಸ್ಮರಿಸಿದರು.

ಮಕ್ಕಳ ಸಾಹಿತ್ಯ ಪರಿಷತ್ತಿನ ಸಂಚಾಲಕ ಎ.ಎಂ. ಜಯರಾಮ್, ಗೌರವಾಧ್ಯಕ್ಷ ಮಹದೇವ್, ಶಿಕ್ಷಕಿ ಮಧುಮತಿ ಮಾತನಾಡಿದರು.

ಗಾಯಕರಾದ ರೂಪ ಮನೋಹರ್, ಸೋಮಶೇಖರ್, ಮೇಘನಾ, ವರುಣ್, ಅನುಪಮ ಹಾಗೂ ಶಾಲಾ ವಿದ್ಯಾರ್ಥಿಗಳು ವೆಂಕಟೇಶ್‌ಮೂರ್ತಿ ಅವರ ಪ್ರಸಿದ್ಧ ಭಾವಗೀತೆಗಳನ್ನು ಹಾಡಿ ನುಡಿ ನಮನ ಅರ್ಪಿಸಿದರು.


ಕಾರ್ಯಕ್ರಮದಲ್ಲಿ ಪರಿಷತ್ತಿನ ಪದಾಧಿಕಾರಿಗಳಾದ ಜಗದೀಶ್, ನಟೇಶ್, ಹರೀಶ್, ಲಕ್ಷ್ಮೀನಾರಾಯಣ್, ಮುಖ್ಯ ಶಿಕ್ಷಕಿ ದೀಪ್ತಿ ಸೋಫಿಯಾ, ಸಂಧ್ಯಾ ಮುಂತಾದವರಿದ್ದರು.

# ನ್ಯಾಯಬೆಲೆ ಅಂಗಡಿ ಮಾಲೀಕರ ಸ್ವಾಭಿಮಾನಿ ಸಮಾವೇಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲಾ ನ್ಯಾಯಬೆಲೆ ಅಂಗಡಿ ಮಾಲಿಕರ ಸಂಘದ ವತಿಯಿಂದ ನಗರದ ಅಂಬೇಡ್ಕರ್ ಭವನದಲ್ಲಿ ನ್ಯಾಯಬೆಲೆ ಅಂಗಡಿ ಮಾಲಿಕರ ಸ್ವಾಭಿಮಾನಿ ಸಮಾವೇಶ ನಡೆಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಂಘದ ರಾಜ್ಯಾಧ್ಯಕ್ಷ ಟಿ. ಕೃಷ್ಣಪ್ಪ, ರಾಜ್ಯದಲ್ಲಿ ನ್ಯಾಯಬೆಲೆ ಅಂಗಡಿ ಮಾಲಿಕರ ಬೇಡಿಕೆಗಳು ಈಡೇರಬೇಕೆಂದರೆ ಒಗ್ಗಟ್ಟು ಬಹಳ ಮುಖ್ಯ, ಇಂದು ನ್ಯಾಯಬೆಲೆ ಅಂಗಡಿ ಮಾಲಿಕರು ಇಂದು ಆಳುವ ಸರ್ಕಾರಗಳ ವಿರುದ್ಧ ಹೋರಾಡಿ ನಮ್ಮ ಬೇಡಿಕೆಗಳನ್ನು ಈಡೇರಿಸಕೊಳ್ಳುವಲ್ಲಿ ಯಶಸ್ವಿಯಾಗಿದ್ದೇವೆ ಎಂದರು.




ಪಡಿತರ ಬೆಲೆ ಹೆಚ್ಚಳ ಹಾಗೂ ಸರ್ವರ್ ಸಮಸ್ಯೆ ಸೇರಿದಂತೆ ಅಂಗಡಿ ಮಾಲೀಕರಿಗೆ ಇದ್ದ ಹಲವು ಸಮಸ್ಯೆಗಳ ಬಗ್ಗೆ ಇಂದಿಗೂ ಹೋರಾಟ ನಡೆಯುತ್ತಿದೆ. ಇದಕ್ಕೆ ಬಲಿಷ್ಠವಾದ ಸಂಘ ಬೇಕು ಎಂಬ ನಿಟ್ಟಿನಲ್ಲಿ ರಾಜ್ಯಾದ್ಯಂತ ಹಾಗೂ ರಾಷ್ಟ್ರ ಮಟ್ಟದಲ್ಲಿಯೂ ಮಾಲೀಕರನ್ನು ಸಂಘಟಿಸಿ ಬಲಿಷ್ಠವಾದ ಸಂಘ ಸ್ಥಾಪಿಸಲಾಗಿದೆ. ಆಳುವ ಸರ್ಕಾರ ಗಳಿಂದ ನಮ್ಮ ಹಕ್ಕುಗಳನ್ನು ಪಡೆಯಲು ಈ ಬಲಿಷ್ಠವಾದ ಸಂಘ ಸಹಕಾರಿಯಾಗಲಿದೆ ಎಂದರು.

ನಮ್ಮ ಹಲವು ಸಮಸ್ಯೆಗಳ ಬಗ್ಗೆ ಹೋರಾಟ ಮಾಡಿಕೊಂಡು ಬಂದ ಆರಂಭದಿಂದಲೂ ಎಲ್ಲಾ ಸರ್ಕಾರಗಳು ಎಲ್ಲಾ ರೀತಿಯ ಪೂರಕ ಸಹಕಾರ ನೀಡಿಕೊಂಡು ಬಂದಿವೆ, ಅಲ್ಲದೆ ಇನ್ನಷ್ಟು ಬೇಡಿಕೆ ಗಳನ್ನು ಸರ್ಕಾರ ಮುಂದೆ ಇಡಲಾಗಿದೆ. ಅವುಗಳನ್ನು ಈಡೇರಿಸುವ ಭರವಸೆಯೊಂದಿಗೆ ಸಂಘ ನಡೆಯುತ್ತಿದೆ. ಸ್ವಯಂ ಪ್ರೇರಿತವಾಗಿ ಎಲ್ಲರೂ ಈ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಸಂಘದ ಶಕ್ತಿಗೆ ಹಿಡಿದ ಕೈಗನ್ನಡಿಯಾಗಿದೆ ಎಂದರು.

ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಚನ್ನಕೇಶವ ಗೌಡ ಮಾತನಾಡಿ, ಕಳೆದ ಕೆಲವು ವರ್ಷಗಳ ಹಿಂದೆ ನ್ಯಾಯಬೆಲೆ ಅಂಗಡಿ ಮಾಲೀಕರನ್ನು ಕಡೆಗಣಿಸುವ ಕಾಲವಿತ್ತು ಆದರೆ ಈಗ ಆ ದಿನಗಳು ಬದಲಾಗಿವೆ. ಅದಕ್ಕೆ ಸಂಘದ ರಾಜ್ಯಾಧ್ಯಕ್ಷ ಕೃಷ್ಣಪ್ಪ ಅವರ ಕೊಡುಗೆ ಅಪಾರ ಎಂದರು.

ತಮ್ಮ ಅವಧಿಯಲ್ಲಿ ಜನಪ್ರತಿನಿಧಿಗಳ ಬೆಂಬಿಡದೆ ನ್ಯಾಯಬೆಲೆ ಅಂಗಡಿ ಮಾಲಿಕರ ಬೇಡಿಕೆಗಳಿಗಾಗಿ ಹೋರಾಡಿ ನಮಗೆ ನ್ಯಾಯ ಒದಗಿಸುವ ಕೆಲಸ ಮಾಡಿದ್ದಾರೆ. ಜೊತೆಗೆ ರಾಜ್ಯದ ಮೂಲೆ ಮೂಲೆಗಳಲ್ಲಿ ಜನರನ್ನು ಸಂಘಟಿಸಿ ಸುಭದ್ರ ಸಂಘ ಸ್ಥಾಪಿಸಿ ಇಂದು ಎಲ್ಲರನ್ನೂ ಒಂದುಗೂಡಿಸುವ ನಿಟ್ಟಿನಲ್ಲಿ ಕೆಲಸ ಮಾಡಿದ್ದಾರೆ. ಅವರ ನೇತೃತ್ವದಲ್ಲಿ ನ್ಯಾಯಬೆಲೆ ಅಂಗಡಿ ಮಾಲಿಕರ ಇನ್ನಷ್ಟು ಬೇಡಿಕೆಗಳು ಈಡೇರಲಿ ಎಂದು ಆಶಿಸಿದರು.

ಸಂಘದ ರಾಜ್ಯ ನಿರ್ದೇಶಕಿ ಮೇಘನಾ, ಜಿಲ್ಲಾ ಉಪಾಧ್ಯಕ್ಷ ಎ.ಎಚ್. ಶಿವಪ್ಪ, ಕಾರ್ಯದರ್ಶಿ ಮಂಜೇಗೌಡ, ತಾಲ್ಲೂಕು ಅಧ್ಯಕ್ಷ ನಾಗರಾಜ್ ಹಾಗೂ ಇತರರಿದ್ದರು.

# ಲೋಕ ಕಲ್ಯಾಣಾರ್ಥ ಧಾರ್ಮಿಕ ಕೈಂಕರ್ಯ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಕ್ಷೇತ್ರದಲ್ಲಿ ಯಾವುದೇ ಅಡಚಣೆಗಳಾಗದಂತೆ ಸಾರ್ವಜನಿಕರಿಗೆ ಮತ್ತು ಲೋಕಕ್ಕೆ ಒಳಿತಾಗಲಿ ಎಂಬ ದೃಷ್ಟಿಯಿಂದ ಶಿರಾಡಿ ಗಡಿಯ ಶ್ರೀ ಚೌಡೇಶ್ವರಿ ದೇವಸ್ಥಾನದಲ್ಲಿ ಕಳಶಾಭಿಷೇಕ ಸೇರಿದಂತೆ ನಾನಾ ಧಾರ್ಮಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.



ತಾಲ್ಲೂಕಿನ ಹಾನುಬಾಳು ಹೋಬಳಿ ಹೆಗ್ಗದ್ದೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶಿರಾಡಿ ಗಡಿಯ ಶ್ರೀ ಚೌಡೇಶ್ವರಿ ದೇವಸ್ಥಾನದಲ್ಲಿ ಹಿಂದು ಧಾರ್ಮಿಕ ಸಂಸ್ಥೆಗಳು ಹಾಗೂ ಧಾರ್ಮಿಕ ದತ್ತಿ ಇಲಾಖೆಯ ವತಿಯಿಂದ ಆಯೋಜಿಸಲಾಗಿದ್ದ ಚೌಡೇಶ್ವರಿ ಅಮ್ಮನವರ ಪ್ರತಿಷ್ಠಾ ವಾರ್ಷಿಕೋತ್ಸವದ ಕಳಶಾಭಿಷೇಕ ಕಾರ್ಯಕ್ರಮದಲ್ಲಿ ಮಾತನಾಡಿದರು. ಶ್ರೀ ಚೌಡೇಶ್ವರಿ ಅಮ್ಮನವರ ಕ್ಷೇತ್ರದ ಮಹಿಮೆಯಿಂದ ಪ್ರತಿ ವರ್ಷ ಲಕ್ಷಾಂತರ ಭಕ್ತರನ್ನು ತನ್ನತ್ತ ಸೆಳೆದುಕೊಳ್ಳುವ ಶಿರಾಡಿ ಗಡಿಯ ಶ್ರೀ ಚೌಡೇಶ್ವರಿ ದೇವಸ್ಥಾನವು ಪ್ರಸಿದ್ಧವಾಗಿದೆ ಎಂದರು.

ಭಾನುವಾರದಿಂದ ಪ್ರಾರಂಭವಾದ ವೈದಿಕ ಪೂಜಾ ಕಾರ್ಯಕ್ರಮಗಳಲ್ಲಿ ತಂತ್ರಿಗಳ ಕ್ಷೇತ್ರ ಪ್ರವೇಶ, ಸಾಮೂಹಿಕ ಪ್ರಾರ್ಥನೆ, ಸ್ಥಳ ಶುದ್ಧಿ, ಪ್ರಸಾದ ಶುದ್ಧಿ, ರಕ್ಷೋಘ್ನ ಹೋಮ, ವಾಸ್ತು ಹೋಮ, ವಾಸ್ತು ಪೂಜೆ, ದಿಕ್ಕಾಲ ಬಲಿ, ಮಹಾಪೂಜೆ ನಡೆಯಿತು. ಸೋಮವಾರ ಮುಂಜಾನೆ ಹೋಮ, ದುರ್ಗಾಹೋಮ, ಕಲಶ ಪೂಜೆ, ಕಲಶಾಭಿಷೇಕ, ನಾಗತಂಬಿಲ, ಪರಿವಾರ ದೇವತಾ ಕಲಶಾಭಿಷೇಕ, ಮಹಾಪೂಜೆ, ಪ್ರಸಾದ ವಿತರಣೆ ಮತ್ತು ಅನ್ನಸಂತರ್ಪಣೆ ನಡೆಯಿತು.

ದಕ್ಷಿಣ ಕನ್ನಡದಿಂದ ಆಗಮನ: ಸುಮಾರು 10 ಶತಮಾನಗಳ ಹಿಂದೆ ದಕ್ಷಿಣ ಕನ್ನಡ ಜಿಲ್ಲೆಯಿಂದ ಬಂದ ಮೂವರು ಅಕ್ಕ-ತಂಗಿಯರು ದಕ್ಷಿಣ ಕನ್ನಡ ಜಿಲ್ಲೆ ಹಾಗೂ ಸಕಲೇಶಪುರ ತಾಲ್ಲೂಕಿನ ಗಡಿಪ್ರದೇಶವನ್ನು ವಿಭಜಿಸುವ ಪಶ್ಚಿಮ ಘಟ್ಟದ ತಪ್ಪಲಿನ ಸಮಾನಾಂತರ ಪ್ರದೇಶದಲ್ಲಿ ನೆಲೆಸಿದ್ದಾರೆ. ಇವರಲ್ಲಿ ಹೆಗ್ಗದ್ದೆ ಹೋಬಳಿಯ ಬಿಸಿಲೆ ಘಾಟ್‌ನ ಗಡಿಪ್ರದೇಶದಲ್ಲಿ ಚೌಡೇಶ್ವರಿ ದೇವಿ, ಶಿರಾಡಿ ಘಾಟ್‌ನ ಗಡಿಪ್ರದೇಶದಲ್ಲಿ ಶ್ರೀ ಚೌಡೇಶ್ವರಿ ದೇವಿ ಹಾಗೂ ಕಾಗಿನರೆ ಗ್ರಾಮದಲ್ಲಿ ಪ್ರತಿಷ್ಠಾಪಿತರಾದ ಚೌಡೇಶ್ವರಿ ದೇವಿಯರು ಎನ್ನಲಾಗಿದೆ.

ದೇವಸ್ಥಾನ ಸಮಿತಿ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಸಾಮಾನ್ಯ ಜ್ಞಾನವಿಲ್ಲದ ಪಾಂಡಿತ್ಯ ನಿಷ್ಪ್ರಯೋಜಕ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಸಾಮಾನ್ಯ ಜ್ಞಾನವಿಲ್ಲದ ಪಾಂಡಿತ್ಯ ಸಮಾಜಕ್ಕೆ ಒಳಿತಲ್ಲ ಎಂದು ಮಂಡ್ಯದ ಶಿಕ್ಷಣ ಇಲಾಖೆ ವಿಶ್ರಾಂತ ಪರಿವೀಕ್ಷಕ ಲೋಕೇಶ್ ಹೇಳಿದರು.

ಪಟ್ಟಣದ ವಿಪ್ರ ನೌಕರರ ಸಂಘದಿಂದ ಆಯೋಜಿಸಿದ್ದ ವಿಪ್ರ ಪುರಸ್ಕಾರ 2025 ಕಾರ್ಯಕ್ರಮದಲ್ಲಿ ಮಾತನಾಡಿ, ಕುಟುಂಬದಲ್ಲಿ ತಾಯಿ ಹಾಗೂ ಶಿಕ್ಷಣದ ಮೂಲಕ ಶಿಕ್ಷಕರಿಂದ ಬಾಲ್ಯದಲ್ಲಿ ಮಕ್ಕಳಿಗೆ ಉತ್ತಮ ಸಂಸ್ಕಾರ ಮೌಲ್ಯಗಳು ದೊರೆಯುತ್ತಿದೆ ಎಂದರು.



ಮೌಲ್ಯಗಳು ಬೆಲೆಕಟ್ಟಲಾಗದ ಆಸ್ತಿಯಾಗಿದೆ. ಸಂಸ್ಕಾರ ದೊರೆತಾಗ ವೃದ್ಧಾಶ್ರಮಗಳು ಇರುವುದಿಲ್ಲ. ಧಾರ್ಮಿಕತೆ ಹಾಗೂ ವಿಜ್ಞಾನದ ಆಳವಾದ ಅಧ್ಯಯನದಿಂದ ಪಾಂಡಿತ್ಯ ಹೆಚ್ಚಾಗುತ್ತದೆ. ನಮ್ಮ ಭಾಷೆ ನಡವಳಿಕೆ ಮತ್ತೊಬ್ಬರ ಮೇಲೆ ಪ್ರಭಾವ ಬೀರುತ್ತದೆ ಎಂದರು.

ಸಪ್ತ ಋಷಿಗಳು ನಮ್ಮ ಆಧ್ಯಾತ್ಮ ಗುರುಗಳು. ಸಪ್ತ ಅನ್ನುವುದು ಜ್ಞಾನದ ವಿಸ್ತೀರ್ಣವಾಗಿದ್ದು, ಜ್ಞಾನ ಹೆಚ್ಚಿಸುವಂಥದ್ದು. ಸುಸಂಸ್ಕೃತ ವ್ಯಕ್ತಿ ಎಂದು ತಪ್ಪಾಗಿ ನಡೆದುಕೊಳ್ಳಲಾರ, ಸಾಧಕರ ಹಿಂದೆ ಅನೇಕ ಪರಿಶ್ರಮಗಳು ಇದೆ. ಹಣದ ಕೊರತೆ ಇದ್ದರೂ ಚಿಂತೆ ಇಲ್ಲ ಗುಣಕ್ಕೆ ಕೊರತೆಯಾಗಬಾರದು. ಹಿರಿಯರನ್ನು ಪೂಜ್ಯರನ್ನು ಗೌರವಿಸುವ ಕಾರ್ಯ ಇಂದಿನ ಯುವ ಪೀಳಿಗೆಯಿಂದ ಆಗಬೇಕು ಎಂದು ತಿಳಿಸಿದರು.

ಕುಟುಂಬ ಸದಸ್ಯರಿಗೆ ಗೌರವ ಕೊಡುವುದನ್ನು ಎಲ್ಲರೂ ಕಲಿಯಬೇಕು. ಹಿರಿಯರನ್ನು ರಾಹು ಕೇತು ಎಂದು ಟೀಕಿಸುವ ಕಾರ್ಯ ಒಳಿತಲ್ಲ. ಸಂಸ್ಕಾರದ ಕೊರತೆಯಿಂದ ಈ ಮಾತುಗಳು ವ್ಯಕ್ತವಾಗುತ್ತದೆ. ವಿಪ್ರ ಸಮಾಜ ನಿತ್ಯ ತಮ್ಮ ಜಪ ತಪ ವೇದ ಮಂತ್ರ ಅನುಷ್ಠಾನ, ಗಾಯತ್ರಿ ಮಂತ್ರದ ಅನುಷ್ಠಾನದೊಂದಿಗೆ ಸಮಾಜದಲ್ಲಿ ಸಹಬಾಳ್ವೆ ನಡೆಸಿ ಉನ್ನತ ಸ್ಥಾನಕ್ಕೆ ಏರಬೇಕು ಎಂದು ಸಲಹೆ ನೀಡಿದರು.

ಪುರಸಭೆ ಮಾಜಿ ಅಧ್ಯಕ್ಷ ಹಾಗೂ ಸದಸ್ಯ ಬನಶಂಕರಿ ರಘು, ಮಾತನಾಡಿ ಬಾಲ್ಯದಲ್ಲಿ ಮಕ್ಕಳಿಗೆ ಸಂಸ್ಕಾರದ ಕೊರತೆಯಾಗಬಾರದು ಎಂದರು.

ಬ್ರಾಹ್ಮಣ ಸಂಘದ ಕಾರ್ಯದರ್ಶಿ ವೆಂಕಟರಮಣ ಮಾತನಾಡಿ. ವಿಪ್ರ ನೌಕರರ ಸಂಘದ ಕಾರ್ಯ ಚಟುವಟಿಕೆ ಶ್ಲಾಘನೀಯ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ವಿಪ್ರ ನೌಕರರ ಸಂಘದ ಅಧ್ಯಕ್ಷ ಡಿ. ಚೇತನ್ ಮಾತನಾಡಿ, ಕಳೆದ 23 ವರ್ಷಗಳಿಂದ ಸಮಾಜಮುಖಿ ಕಾರ್ಯಕ್ರಮಗಳು ನಡೆಯುತ್ತಿದ್ದು, ಯುವ ಪೀಳಿಗೆ ನಮ್ಮ ಸಂಗಡ ಕೈಜೋಡಿಸಬೇಕು ಎಂದರು.

ವಿಪ್ರ ನೌಕರರ ಸಂಘದ ಪದಾಧಿಕಾರಿಗಳಾದ, ನಾಗೇಂದ್ರ, ಶ್ರೀಕಂಠ, ಪವನ್ ಗೌರಿಶಂಕರ್, ರವಿ ಬಾಳಗಂಚಿ ವೆಂಕಟರಮಣ, ಪ್ರಸಾದ್ ಮುಂತಾದವರಿದ್ದರು.

# ಸರ್ಕಾರಿ ಶಾಲೆಗೆ ಬೆಂಚ್-ಡೆಸ್ಕ್ ಕೊಡುಗೆ

ಹಾಸನ: ಅರಸೀಕೆರೆಯ ಸೈಯದ್ ಹಮೀದ್ ಅವರು 2, ಹಾಸನದ ಜೀವನ್ ಗೌಡ ಹಾಗೂ ಅನುರಾಧ 30 ಬೆಂಚ್ ಮತ್ತು ಡೆಸ್ಕ್‌ಗಳನ್ನು ಸರ್ಕಾರಿ ಶಾಲೆಗೆ ಕೊಡುಗೆ ನೀಡಿದ್ದಾರೆ. ಜಿಲ್ಲಾಧಿಕಾರಿ ಸಿ. ಸತ್ಯಭಾಮ ಸ್ವೀಕರಿಸಿದರು. ಸಾರ್ವಜನಿಕ ಶಿಕ್ಷಣ ಇಲಾಖೆ ಉಪನಿರ್ದೇಶಕ ಹೆಚ್.ಎಸ್. ಚಂದ್ರಶೇಖರ್ ಹಾಗೂ ದಾನಿಗಳು ಇದ್ದರು

# ಇತಿಹಾಸದಲ್ಲಿ ಈ ದಿನ

## ಜೂನ್ -4

**1940:** ಬ್ರಿಟಿಷ್ ಸಾಮ್ರಾಜ್ಯ ಗಗಐಐ ಸಮಯದಲ್ಲಿ **Dunkirk Evacuation** ಮುಗಿಸಿದ ದಿನ. (ಭಾರತೀಯ ಸೈನಿಕರೂ ಭಾಗವಹಿಸಿದ್ದರು).

**1989:** ಟಿಯಾನಮೆನ್ ಚೌಕದ ಹಿಂಸಾಚಾರ. ಈ ದಿನ ಚೀನಾ ದೇಶದಲ್ಲಿ ಟಿಯಾನಮೆನ್ ಚೌಕದಲ್ಲಿ ವಿದ್ಯಾರ್ಥಿ ಆಂದೋಲನದ ಮೇಲೆ ಚೀನಾದ ಸೇನೆ ದಾಳಿಯಾಗಿ ಸಾವಿರಾರು ಜನರು ಮೃತರಾದರು.

**2014:** ನರೇಂದ್ರ ಮೋದಿಯವರು ಮೊದಲ ಬಾರಿಗೆ ಪ್ರಧಾನಿಯಾಗಿ ಅಧಿಕಾರ ವಹಿಸಿಕೊಂಡರು. ಬಿಜೆಪಿ ಭಾರಿ ಬಹುಮತದಿಂದ ಗೆದ್ದ ನಂತರದ ಉಪಚುನಾವಣೆಗಳ ಮೊದಲ ಹಂತದ ಫಲಿತಾಂಶ ಈ ದಿನ ಪ್ರಕಟವಾಯಿತು.

**2018:** ಭಾರತೀಯ ನೌಕಾಪಡೆ ಬಿಹಾರ್ ನೌಕಾ ಸೇವೆಗೆ ಸೇರಿತು.

### ಜನನ

**1958:** ಮಹೇಶ್ ದತ್ತಾನಿ, ಖ್ಯಾತ ನಾಟಕಕಾರ, ನಿರ್ದೇಶಕ ಮತ್ತು ನಟ.

### ಮರಣ

**1962:** ಆಚಂತ ಲಕ್ಷ್ಮಿಪತಿ, ಪ್ರಖ್ಯಾತ ವೈದ್ಯಕೀಯ ವಿಜ್ಞಾನಿ ಮತ್ತು ಸಮಾಜ ಸೇವಕ.

**2024:** ಬಿ.ಆರ್.ಪಿ. ಭಾಸ್ಕರ್, ಖ್ಯಾತ ಪತ್ರಕರ್ತ. ಭಾರತೀಯ ಪತ್ರಿಕೋದ್ಯಮದಲ್ಲಿ ಪ್ರಮುಖ ಪಾತ್ರವಹಿಸಿದ್ದರು.

**2023:** ಜಮುನಾ, ಪ್ರಖ್ಯಾತ ನಟಿ.

# ಅಂತರ ಕಾಲೇಜು ಕ್ರೀಡಾಕೂಟದಲ್ಲಿ ಸಾಧನೆ



ಹಾಸನ: ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಇತ್ತೀಚೆಗೆ ನಡೆದ ಹಾಸನ ವಿಶ್ವ ವಿದ್ಯಾನಿಲಯ ಮಟ್ಟದ ಅಂತರ ಕಾಲೇಜು ಮಹಿಳಾ ಕ್ರೀಡಾಕೂಟದ ಬ್ಯಾಸ್ಕೆಟ್ ಬಾಲ್ ಹಾಗೂ ಹ್ಯಾಂಡ್ ಬಾಲ್ ಪಂದ್ಯಾವಳಿಯಲ್ಲಿ ನಗರದ ಆರ್.ಸಿ. ರಸ್ತೆಯ ಗಂಧದ ಕೋಠಿ ಆವರಣದಲ್ಲಿರುವ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿನಿಯರ ತಂಡ ಬಹುಮಾನ ಪಡೆದಿದೆ.

ಬ್ಯಾಸ್ಕೆಟ್ ಬಾಲ್‌ನಲ್ಲಿ ದ್ವಿತೀಯ ಹಾಗೂ ಹ್ಯಾಂಡ್‌ಬಾಲ್‌ನಲ್ಲಿ ತೃತೀಯ ಬಹುಮಾನ ಪಡೆದುಕೊಂಡಿದ್ದು, ಕ್ರೀಡಾಕೂಟದಲ್ಲಿ ಕಾಲೇಜಿನ ವಿದ್ಯಾರ್ಥಿನಿಯರಾದ ಯಶಸ್ವಿನಿ, ಅರ್ಚನ ಕುಮಾರಿ, ಬಿ.ವಿ. ನಂದಿನಿ, ಸ್ಪಂದನ, ದೀಕ್ಷಿತ, ವಸಂತ, ಸಂಜನ, ವೈ.ಡಿ. ಸ್ಫೂರ್ತಿ, ಅರ್ಚನ ಭಾಗವಹಿಸಿದ್ದರು.

ಕಾಲೇಜಿನ ದೈಹಿಕ ಶಿಕ್ಷಣ ನಿರ್ದೇಶಕಿ ಡಾ. ಹೇಮಲತಾ ವಿದ್ಯಾರ್ಥಿನಿಯರಿಗೆ ತರಬೇತಿ ನೀಡಿದರು. ಪ್ರಾಂಶುಪಾಲ ಡಿ.ಕೆ. ಮಂಜಯ್ಯ ಪ್ರಶಸ್ತಿ ಪತ್ರ ನೀಡಿದರು. ಕ್ರೀಡಾ ವಿಭಾಗದ ಮುಖ್ಯಸ್ಥೆ ಡಾ. ಸುನೀತ ಹಾಜರಿದ್ದರು.

# ಇಂದು ವಿದ್ಯುತ್ ವ್ಯತ್ಯಯ

ಹಾಸನ: ಹೊಳೆನರಸೀಪುರ ನೋಡಲ್ ಕೇಂದ್ರ ವ್ಯಾಪ್ತಿಯ 66/11 ಕೆ.ವಿ.ವಿ.ವಿ.ಕೇಂದ್ರ ಮಳಲಿಯಲ್ಲಿ ಮೊದಲನೇ ತ್ರೈಮಾಸಿಕ ನಿರ್ವಹಣಾ ಕಾರ್ಯ ಕೈಗೊಂಡಿರುವುದರಿಂದ ವ್ಯಾಪ್ತಿಯಲ್ಲಿ ವಿದ್ಯುತ್ ಸಂಪರ್ಕದಲ್ಲಿ ವ್ಯತ್ಯಯವಾಗಲಿದೆ. ಮಳಲಿ ಶಾಖಾ ವ್ಯಾಪ್ತಿಯ ಮಳಲಿ, ದುಮ್ಮಗೆರೆ, ತೆರಣ್ಯ, ಮಾವನೂರು, ಲಕ್ಷ್ಮೀಪುರ, ಜಾಗರಹಳ್ಳಿ, ದೇವಿಹಳ್ಳಿ, ಸಂತೆಕೊಪ್ಪಲು, ನಾಗನಹಳ್ಳಿ, ಮರ್ಕುಲಿ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಬುಧವಾರ ಬೆಳಿಗ್ಗೆ 10 ರಿಂದ ಸಂಜೆ 5ರ ವರೆಗೆ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಹೊಳೆನರಸೀಪುರ ನೋಡಲ್ ಕೇಂದ್ರದ ಸಹಾಯಕ ಕಾರ್ಯನಿರ್ವಾಹಕ ಎಂಜಿನೀಯರ್ ತಿಳಿಸಿದ್ದಾರೆ.

# ಹಣಕಾಸಿನ ವೈಷಮ್ಯ: ಕೊಲೆ ಅಪರಾಧಿಗೆ ಕಾರಾಗೃಹ ಶಿಕ್ಷೆ

ಹಾಸನ: ಕೂಲಿ ಹಣವನ್ನು ಕೊಡಲಿಲ್ಲವೆಂದು ವ್ಯಕ್ತಿಯ ಮೇಲೆ ಹಲ್ಲೆ ನಡೆಸಿ ಕೊಲೆಗೈದಿದ್ದ ಅಪರಾಧಿಗೆ 6 ವರ್ಷ ಕಾರಾಗೃಹ ಶಿಕ್ಷೆ ಹಾಗೂ 3 ಲಕ್ಷ ರೂ. ದಂಡ ವಿಧಿಸಿ ಜಿಲ್ಲಾ ನ್ಯಾಯಾಲಯ ತೀರ್ಪು ಪ್ರಕಟಿಸಿದೆ.

ದಾದಾಸಾಬ್ ಶಿಕ್ಷೆಗೆ ಒಳಗಾದ ಅಪರಾಧಿ. 2021ರ ಜ. 22 ರಂದು ಸಯ್ಯದ್ ಜಬೀವುಲ್ಲಾ ಎಂಬುವರ ಜೊತೆ ಜಗಳ ಮಾಡಿದ್ದ ದಾದಾಸಾಬ್ ಮಾರಣಾಂತಿಕ ಹಲ್ಲೆ ನಡೆಸಿದ್ದ. ಕಬ್ಬು ಲೋಡ್ ಮಾಡುವ ಕಾಯಕ ಮಾಡಿಕೊಂಡಿದ್ದ ದಾದಾಸಾಬ್ ಹಣ ಕೊಡುವಂತೆ ತನ್ನ ಹೆಂಡತಿ ಜೊತೆ ಜಗಳ ಮಾಡುತ್ತಿದ್ದ. ಆಗ ಅಲ್ಲಿಗೆ ಬಂದ ಸಯ್ಯದ್ ಜಬೀವುಲ್ಲಾ ದಂಪತಿಯ ಜಗಳ ಬಿಡಿಸಿ ತೆರಳಿದ್ದರು. ಆತನ ಹಿಂಬಾಲಿಸಿಕೊಂಡು ಬಂದ ದಾದಾಸಾಬ್ ಮುಂಗಡ ಹಣ ಕೊಡದೆ ಜಗಳ ಬಿಡಿಸಲು ಬರಿತ್ತೀಯ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿ ದೊಣ್ಣೆಯಿಂದ ಹೊಡೆದು ಗಂಭೀರ ಗಾಯಗೊಳಿಸಿದ್ದ. ಗಾಯಾಳುವಿಗೆ ಹಾಸನ, ಬೆಂಗಳೂರಿನ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಕೊಡಿಸಿ ಹೆಚ್ಚಿನ ಚಿಕಿತ್ಸೆಗಾಗಿ ಮಂಗಳೂರಿಗೆ ಕರೆದೊಯ್ಯುತ್ತಿದ್ದಾಗ ಮಾರ್ಗಮಧ್ಯೆ ಮೃತಪಟ್ಟಿದ್ದರು. ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದ ಅರೇಹಳ್ಳಿ ಠಾಣೆ ಪೊಲೀಸರು ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದರು.

ಪ್ರಕರಣ ವಿಚಾರಣೆ ನಡೆಸಿದ 2ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಎಸ್.ಎ. ಹಿದಾಯತ್ ಉಲ್ಲಾ ಷರೀಫ್ ಅವರು ಅಪರಾಧಿ ದಾದಾಸಾಬ್ ಗೆ 6 ವರ್ಷ ಕಾರಾಗೃಹ ಶಿಕ್ಷೆ ಹಾಗು 3 ಲಕ್ಷ ರೂ. ದಂಡ ವಿಧಿಸಿ ಮೇ 31 ರಂದು ಆದೇಶಿಸಿದ್ದಾರೆ. ಸರ್ಕಾರದ ಪರವಾಗಿ ಕೆ.ಎಸ್. ನಾಗೇಂದ್ರ ವಾದ ಮಂಡಿಸಿದರು.

# ಹೇಮಾವತಿ ಬಡಾವಣೆಯಲ್ಲಿ ಸ್ವಚ್ಛತೆ ಕಾಪಾಡಲು ಸೂಚನೆ



ಸಕಲೇಶಪುರ: ಪಟ್ಟಣದ ಹೇಮಾವತಿ ನಗರ ಬಡಾವಣೆಯಲ್ಲಿ ಸ್ವಚ್ಛತೆ ಕಾಪಾಡಬೇಕು ಎಂದು ಶಾಸಕ ಸಿಮೆಂಟ್ ಮಂಜು ಅಧಿಕಾರಿಗಳಿಗೆ ಸೂಚಿಸಿದರು.

ವಾರ್ಡ್ ನಂ. 1ರ ಹೇಮಾವತಿ ನಗರ ಬಡಾವಣೆಗೆ ಮಂಗಳವಾರ ಭೇಟಿ ನೀಡಿದ ಅವರು, ಚರಂಡಿ' ಅವ್ಯವಸ್ಥೆ ಪರಿಶೀಲಿಸಿ ನಂತರ ಅಂಗನವಾಡಿ ಅವ್ಯವಸ್ಥೆ ಕಂಡು ಗರಂ ಆದರು.

# ಗಾಂಜಾ ಮಾರಾಟ ಮಾಡುತ್ತಿದ್ದ ಮೂವರ ಬಂಧನ

ಹೊಳೆನರಸೀಪುರ: ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ ಅಂತರ ಜಿಲ್ಲೆಯ ಮೂವರನ್ನು ಬಂಧಿಸಿರುವ ಗ್ರಾಮಾಂತರ ಠಾಣೆ ಪೊಲೀಸರು 11 ಲಕ್ಷ ರೂ. ಮೌಲ್ಯದ 23 ಕೆ.ಜಿ. ಗಾಂಜಾ ಪದಾರ್ಥ ವಶಪಡಿಸಿಕೊಂಡಿದ್ದಾರೆ.

ತುಮಕೂರು ಜಿಲ್ಲೆ ಗುಬ್ಬಿ ನಿವಾಸಿ ಕೈಸರ್ ಖಾನ್, ಮೈಸೂರು ಜಿಲ್ಲೆ ಕೆ.ಆರ್. ನಗರ ತಾಲ್ಲೂಕು ಭೇರ್ಯ ಗ್ರಾಮದ ಷಫೀಉಲ್ಲಾಖಾನ್ ಹಾಗೂ ಬೆಂಗಳೂರಿನ ಹೆಚ್.ಎಸ್. ರೇಷ್ಮಾ ಬಂಧಿತರು. ಖಚಿತ ಮಾಹಿತಿ ಮೇರೆಗೆ ಗ್ರಾಮಾಂತರ ಠಾಣೆ ಪಿಎಸ್‌ಐ ರಮೇಶ್ ಕುಮಾರ್ ಅವರು ಪುರಸಭೆಯ ಇಬ್ಬರು ಸಿಬ್ಬಂದಿಯೊಂದಿಗೆ ಪೆದ್ದನಹಳ್ಳಿ ಗೇಟ್ ಸಮೀಪದ ರಸ್ತೆಯಲ್ಲಿ ನಿಂತಿದ್ದವರ ಮೇಲೆ ದಾಳಿ ನಡೆಸಿದ್ದಾರೆ. ತಮ್ಮ ಮೇಲೆ ದಾಳಿಯಾಗುತ್ತಿರುವುದನ್ನು ಅರಿತ ಮೂವರು ಅಲ್ಲಿಂದ ಓಡಲು ಪ್ರತ್ನಿಸಿದರಾದರೂ ಪೊಲೀಸರು ಅವರನ್ನು ಬೆನ್ನಟ್ಟಿ ಹಿಡಿದಿದ್ದಾರೆ. ಬಂಧಿತರಿಂದ 23 ಕೆ.ಜಿ. ತೂಕದಷ್ಟು ಕಾಂಡ, ಬೇರು ಸಮೇತ ಇರುವ ಹಸಿ ಮತ್ತು ಒಣಗಿದಂತಿರುವ ಗಾಂಜಾ ಸೊಪ್ಪು ವಶಪಡಿಸಿಕೊಳ್ಳಲಾಗಿದೆ. ಗ್ರಾಮಾಂತರ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248